ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

No. ED/KEA/Med-Reg/2024

Date: 27-05-2024

# ಪತ್ರಿಕಾ ಪ್ರಕಟಣೆ

## 2024 – ವೈದ್ಯಕೀಯ, ದಂತ ವೈದ್ಯಕೀಯ, ಆಯುರ್ವೇದ, ಯುನಾನಿ, ಹೋಮಿಯೋಪತಿ ಕೋರ್ಸುಗಳ ಪ್ರವೇಶಾತಿಗೆ ಆನ್‌ಲೈನ್ ಅರ್ಜಿ ಸಲ್ಲಿಕೆ – ಮತ್ತೊಂದು ಅವಕಾಶ

ಇಂಜಿನಿಯರಿಂಗ್, ಆರ್ಕಿಟೆಕ್ಚರ್ ಹಾಗು ವೈದ್ಯಕೀಯ, ದಂತ ವೈದ್ಯಕೀಯ, ಆಯುರ್ವೇದ, ಯುನಾನಿ, ಹೋಮಿಯೋಪತಿ ಕೋರ್ಸುಗಳೂ ಸೇರಿದಂತೆ ಎಲ್ಲಾ ವೃತ್ತಿಪರ ಕೋರ್ಸುಗಳ ಸೀಟು ಹಂಚಿಕೆಗೆ ಆನ್‌ಲೈನ್ ಅರ್ಜಿಯು ಸಾಮಾನ್ಯವಾಗಿದ್ದು, ಕೆಇಎ ನಲ್ಲಿ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ನೊಂದಾಯಿಸಿಕೊಂಡು, ಆನ್‌ಲೈನ್ ಅರ್ಜಿ ಸಲ್ಲಿಸಿ, ಅರ್ಜಿ ಶುಲ್ಕ ಪಾವತಿಸುವುದು ಕಡ್ಡಾಯವಾಗಿರುತ್ತದೆ ಎಂದು 2024ರ ಯುಜಿಸಿಇಟಿ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿಯೇ ಸೂಚಿಸಲಾಗಿತ್ತು ಮತ್ತು ಸಾಕಷ್ಟು ಬಾರಿ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿತ್ತು.

ಆದಾಗ್ಯೂ ಅಭ್ಯರ್ಥಿಗಳು ಮತ್ತು ಪೋಷಕರು ಕರ್ನಾಟಕದಲ್ಲಿನ ವೈದ್ಯಕೀಯ, ದಂತ ವೈದ್ಯಕೀಯ, ಆಯುರ್ವೇದ, ಯುನಾನಿ, ಹೋಮಿಯೋಪತಿ ಕೋರ್ಸುಗಳ ಪ್ರವೇಶಕ್ಕೆ ಆನ್‌ಲೈನ್ ಅರ್ಜಿ ಸಲ್ಲಿಸಲು ಮತ್ತೊಮ್ಮೆ ಅವಕಾಶ ನೀಡಲು ಕೋರುತ್ತಿದ್ದಾರೆ.

ಈ ಹಿನ್ನಲೆಯಲ್ಲಿ ಯುಜಿನೀಟ್ 2024 ರ ಫಲಿತಾಂಶ ಪ್ರಕಟಣೆಯ ನಂತರ, ವೈದ್ಯಕೀಯ, ದಂತ ವೈದ್ಯಕೀಯ, ಆಯುರ್ವೇದ, ಯುನಾನಿ, ಹೋಮಿಯೋಪತಿ ಕೋರ್ಸುಗಳ ಪ್ರವೇಶಕ್ಕೆ ಅರ್ಜಿ ಸಲ್ಲಿಸಲು ಮೂರು ದಿನಗಳ ಕಾಲಾವಕಾಶ ನೀಡಲಾಗುವುದು. ಕರ್ನಾಟಕದಲ್ಲಿನ ವೈದ್ಯಕೀಯ, ದಂತ ವೈದ್ಯಕೀಯ, ಆಯುರ್ವೇದ, ಯುನಾನಿ, ಹೋಮಿಯೋಪತಿ ಕೋರ್ಸುಗಳ ಪ್ರವೇಶಕ್ಕೆ ಆನ್‌ಲೈನ್ ಅರ್ಜಿ ಸಲ್ಲಿಸುವ ದಿನಾಂಕಗಳ ವಿವರಗಳಿಗಾಗಿ ಅಭ್ಯರ್ಥಿಗಳು ಆಗಿದ್ದಾಗ್ಗೆ ಪ್ರಾಧಿಕಾರದ ವೆಬ್‌ಸೈಟ್‌ಗೆ ಭೇಟಿ ನೀಡುತ್ತಿರಲು ಸೂಚಿಸಿದೆ.

**ಸೂಚನೆ:** ಕರ್ನಾಟಕ ರಾಜ್ಯದ ವೈದ್ಯಕೀಯ ಮತ್ತು ದಂತ ವೈದ್ಯಕೀಯ **ಆಯುರ್ವೇದ, ಯುನಾನಿ, ಹೋಮಿಯೋಪತಿ** ಕೋರ್ಸುಗಳಿಗೆ ಪ್ರವೇಶ ಪಡೆಯಲು ಅರ್ಹರಾಗಲು ಕೆಇಎ ನಲ್ಲಿ ಆನ್‌ಲೈನ್ ಮೂಲಕ ನೊಂದಾಯಿಸಿಕೊಳ್ಳುವುದು ಕಡ್ಡಾಯವಾಗಿರುತ್ತದೆ.

ಕಾರ್ಯನಿರ್ವಾಹಕ ನಿರ್ದೇಶಕರು

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in